ಇ) ಪ್ರಸ್ತಾವನೆ ಸರ್ಕಾರದ ಮುಂದಿಲ್ಲದ ಕಾರಣ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಕೃಷಿ ಪಾರ್ಕ್ ಸ್ಥಾಪಿಸುವುದು

566 (356) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವನಹಳ್ಳಿ ಅಂತರ್ ರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪ ಅಂತರ್ ರಾಷ್ಟ್ರೀಯ ಕೃಷಿ ಪಾರ್ಕ್ ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ ಎಂದು ಪ್ರಾರಂಭ ಮಾಡಲಾಗುವುದು, ಇದಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು?

ಶ್ರೀ ಎಸ್.ಎ. ರವೀಂದ್ರನಾಥ್ (ಕೃಷಿ ಸಚಿವರು) :

ಅ) ಇಲ್ಲಾ.

ಆ) - ಅನ್ವಯಿಸುವುದಿಲ್ಲ –

ಕೃಷಿ ಉತ್ಪನ್ನ ಸಮಿತಿಯಿಂದ ಮಾರುಕಟ್ಟೆ ಸ್ಥಾಪಿಸುವುದು

567 (358) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ) : ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ರೇಷ್ಮೆ ಇಲಾಖೆಯ ಜಮೀನಿನಲ್ಲಿ ಮಾರುಕಟ್ಟೆ ಸ್ಥಾಪಿಸಲು ಸರ್ಕಾರವು ತೀರ್ಮಾನಿಸಿದೆಯೇ;

ಆ) ಹಾಗಿದ್ದಲ್ಲಿ, ಎಂದು ಕಾಮಗಾರಿಯನ್ನು ಪ್ರಾರಂಭಿಸಿ ಪೂರ್ಣಗೊಳಿಸಲಾಗುವುದು; ಇದರ ಅನುದಾನ ಮೊತ್ತವೆಷ್ಟು?

ಶ್ರೀ ಶಿವರಾಜ್ ತಂಗಡಗಿ (ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು) : ಅ) ದೊಡ್ಡಬಳ್ಳಾಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಉಪ ಮಾರುಕಟ್ಟೆಯಾದ ದೇವನಹಳ್ಳಿಯ ಲಾಲಗೊಂಡನಹಳ್ಳಿಯಲ್ಲಿ ರೇಷ್ಮೆ ಇಲಾಖೆಗೆ ಸೇರಿದ ಸರ್ವೆ ಸಂಖ್ಯೆ: 41, 42, 43 ರಲ್ಲಿನ 13.28 ಎಕರೆ ಜಮೀನು ಪಡೆದು ಉಪ ಮಾರುಕಟ್ಟೆ ಪ್ರಾಂಗಣ ನಿರ್ಮಿಸಲು ದಿನಾಂಕ: 29/08/2006 ರಲ್ಲಿ ದೊಡ್ಡಬಳ್ಳಾಪುರ ಸಮಿತಿಯಲ್ಲಿ ತೀರ್ಮಾನಿಸಲಾಗಿತ್ತು. ಆದರೆ, ಸದರಿ ಜಮೀನು ಜಿಲ್ಲಾಧಿಕಾರಿಗಳ ಆದೇಶ ಸಂ:ಎಲ್ಎನ್ಡಿ/ ಸಿಆರ್/204/2007–08 ದಿನಾಂಕ: 17/05/2008 ರಲ್ಲಿ ಕೇಂದ್ರ ಸರ್ಕಾರದ ಬಾಹ್ಯಾಕಾಶ ಇಲಾಖೆಗೆ ಸೇರಿದ ಇಸ್ರೋ ಸಂಸ್ಥೆಗೆ ವರ್ಗಾವಣೆಗೊಂಡಿರುವುದರಿಂದ ಉಪ ಮಾರುಕಟ್ಟೆ ನಿರ್ಮಾಣ ಮಾಡಲು ಸಾಧ್ಯವಾಗಿರುವುದಿಲ್ಲ.

ಆ) – ಅನ್ವಯಿಸುವುದಿಲ್ಲ –